ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ : 22ನೇ ಜುಲೈ, 2019

ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಬಗ್ಗೆ

ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

471 (466) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಅಗತ್ಯ ಮೂಲ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮೂಲಭೂತ ಸೌಲಭ್ಯಗಳೊಂದಿಗೆ ಅವುಗಳ ಸ್ವಚ್ಛತೆ ಮತ್ತು ದುರಸ್ತಿ ಕಾರ್ಯಗಳನ್ನು ಯಾವಾಗ ಮಾಡಲಾಗುವುದು; (ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಹಿಂದುಳಿದ ವರ್ಗಗಳ ವಸತಿ ನಿಲಯಗಳಿವೆ ? (ಸಂಪೂರ್ಣ ವಿವರ ನೀಡುವುದು)